ಮಾನದಂಡವನ್ನು ಬಾಗಲಕೋಟೆ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೂ ಅನ್ವಯಿಸಲಾಗುತ್ತಿದೆ.

ಆ) ಬಾಗಲಕೋಟೆ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಹೆಚ್ಚುವರಿಯಾಗಿ ಔಷಧಗಳ ಬೇಡಿಕೆ ಸಲ್ಲಿಸಿದ್ದಲ್ಲಿ, ಅವುಗಳ ಪೂರೈಕೆಗೆ ಅಗತ್ಯ ಕ್ರಮಕೈಗೊಳ್ಳಲಾಗುವುದು.

ಇ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಪ್ರಾಥಮಿಕ ಕೇಂದ್ರಗಳಲ್ಲಿ ವೈದ್ಯರು ಹೊರಗಡೆ ಔಷಧಿ ಕೊಂಡು ಕೊಳ್ಳಲು ಚೀಟಿ ಬರೆಯುವುದನ್ನು ನಿಷೇಧಿಸಲಾಗಿದೆ.

ಈ) ಅಂತಹ ವೈದ್ಯರುಗಳ ವಿರುದ್ಧ ನಿಯಮಾನುಸಾರ ಶಿಸ್ತಿನ ಕ್ರಮ ಜರುಗಿಸಲಾಗುವುದು.

ಸೂರತ್ಕಲ್‌ನಲ್ಲಿ ಆರ್.ಟಿ.ಓ. ಕಛೇರಿ ತೆರೆಯುವ ಬಗ್ಗೆ

1649(2147); ಶ್ರೀ ಮೋಹಿಯುದ್ದೀನ್ ಬಾವಾ ಬಿ.ಎ. (ಮಂಗಳೂರು ನಗರ ಉತ್ತರ)

ಅ) ಸುರತ್ಕಲ್‌ನಲ್ಲಿ ಆರ್.ಟಿ.ಓ ಕಛೇರಿ ತೆರೆಯುವ ಬಗ್ಗೆ ಆದೇಶವಾಗಿದ್ದು, ಇದುವರೆಗೂ ಕಾರ್ಯಗತಗೊಂಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಯಾವ ಕ್ರಮ ಕೈಗೊಂಡಿದೆ?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ) ಮತ್ತು ಆ) ಸಾರಿಗೆ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇರುವುದರಿಂದ ಸೂರತ್ಕಲ್‌ನಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಕಛೇರಿ ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ. ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದ್ದು, ಅವುಗಳು ಭರ್ತಿಯಾದ ತಕ್ಷಣ ಕಛೇರಿಯನ್ನು ಪ್ರಾರಂಭಿಸಲಾಗುವುದು.